# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 228 | Pages. 2 | Date: 22-07-2025, TUESDAY | RNI NO: KARKAN/2024/89601

ಸಂಪುಟ : 01 - ಸಂಚಿಕೆ : 228 - ಪುಟಗಳು : 2 - 22 ಜುಲೈ 2025 ಮಂಗಳವಾರ | Ph: 8762954248 | ದರ : ₹1


# ಪ್ರತಿ ಕುಟುಂಬದ ಆರೋಗ್ಯ ಕಾಪಾಡಿ: ಡಿಸಿ

## 30 ವರ್ಷ ಮೇಲ್ಪಟ್ಟ ಎಲ್ಲರ ತಪಾಸಣೆ ಕಡ್ಡಾಯ | ಗೃಹ ಆರೋಗ್ಯ ಕಾರ್ಯಕ್ರಮ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಪ್ರತಿಯೊಂದು ಕುಟುಂಬದ ಆರೋಗ್ಯವನ್ನು ಉತ್ತಮವಾಗಿಡುವ ಮೂಲಕ ಸ್ವಸ್ಥ ಸಮಾಜ ನಿರ್ಮಾಣಕ್ಕೆ ಕಂಕಣಬದ್ಧರಾಗಿ ಕೆಲಸ ಮಾಡಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿಯ ಬಿ.ಸಿ.ರಾಯ್ ಸಭಾಂಗಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಗೃಹ ಆರೋಗ್ಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ನಿಸ್ವಾರ್ಥದಿಂದ ನಿರಂತರ ಮತ್ತು ಗುರುತರವಾಗಿ ಸೇವೆ ಮಾಡುತ್ತಿರುವುದಕ್ಕೆ ಅಧಿಕಾರಿಗಳಿಗೆ ಅಭಿನಂದನೆಗಳು. ಇದೇ ರೀತಿ ಸಾರ್ವಜನಿಕರಿಗೆ ಸರ್ಕಾರದ ವಿವಿಧ ಯೋಜನೆಯಡಿ ಉಚಿತವಾಗಿ ಆರೋಗ್ಯ ಸೇವೆ ಕಲ್ಪಿಸುವ ಮೂಲಕ ಸಮಾಜವನ್ನು ಆರೋಗ್ಯವಾಗಿರಿಸಲು ಬದ್ಧರಾಗಿ ಎಂದರು.

ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಆರೋಗ್ಯಕ್ಕೂ ಒತ್ತು ನೀಡಬೇಕು. ಈ ನಿಟ್ಟಿನಲ್ಲಿ ಜನರು ಆರೋಗ್ಯದ ಬಗ್ಗೆ ಕಾಳಜಿ ವಹಿಸುವಂತೆ ಹೆಚ್ಚಿನ ಅರಿವು ಮೂಡಿಸಿ ಎಂದರಲ್ಲದೆ, ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವಂತೆ ಜನರಿಗೆ ತಿಳುವಳಿಕೆ ನೀಡಿ ಎಂದರು.

ಗೃಹ ಆರೋಗ್ಯ ಯೋಜನೆಯಡಿ ಮನೆ ಮನೆಗೆ ಭೇಟಿ ನೀಡಿ ಗ್ರಾಮೀಣ ಪ್ರದೇಶದಲ್ಲಿ 30 ವರ್ಷ ಮೇಲ್ಪಟ್ಟವರ ಆರೋಗ್ಯವನ್ನು ಕಡ್ಡಾಯವಾಗಿ ತಪಾಸಣೆ ನಡೆಸಿ ಈಗಾಗಲೇ ಗುರುತಿಸಿರುವ 14 ಅಸಾಂಕ್ರಾಮಿಕ ರೋಗಗಳನ್ನು ಪ್ರಾರಂಭಿಕ ಹಂತದಲ್ಲಿಯೇ ಪತ್ತೆಹಚ್ಚಿ ನಿರಂತರ ಆರೋಗ್ಯ ಚಿಕಿತ್ಸೆ ನೀಡುವ ಮೂಲಕ ಮುಂದೆ ಉಂಟಾಗಬಹುದಾದ ಸಾವು ನೋವುಗಳ ಪ್ರಮಾಣ ತಡೆಯಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಮನೆಯಲ್ಲಿ ಒಬ್ಬರಿಗೆ ಆರೋಗ್ಯ ಸರಿ ಇಲ್ಲದಂತಾದರೆ ಸಂತೋಷ, ನೆಮ್ಮದಿ, ಶಾಂತಿಯುತವಾಗಿ ಜೀವನ ನಡೆಸಲು ಸಾಧ್ಯವಿಲ್ಲ. ಈ ನಿಟ್ಟಿನಲ್ಲಿ ಸಾರ್ವಜನಿಕರು ತಮ್ಮ ಕುಟುಂಬದ ಆರೋಗ್ಯವನ್ನು ಕಾಪಾಡಿಕೊಳ್ಳಲು ಕಾಳಜಿ ವಹಿಸಬೇಕು. ಯಾವುದೇ ಊಹಾಪೋಹಗಳಿಗೆ ಕಿವಿಗೊಡದಂತೆ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು. ಮಾದಕ ವಸ್ತು ಸೇವನೆಯಿಂದ ಹಾಗೂ ಮೊಬೈಲ್ ಬಳಕೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಯುವ ಜನತೆಗೆ ಅರಿವು ಮೂಡಿಸಬೇಕು. ಜಿಲ್ಲೆಯಲ್ಲಿ ಕ್ಯಾನ್ಸರ್ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿರುವ ಬಗ್ಗೆಯೂ ಕೂಡ ಜನರಲ್ಲಿ ಜಾಗೃತಿ ಮೂಡಿಸಿ ಎಂದರು.

ಗೃಹ ಆರೋಗ್ಯ ಕಾರ್ಯಕ್ರಮದಡಿಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ಕೈಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಲು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ 486 ಉಪಕೇಂದ್ರಗಳಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಲು ಅಗತ್ಯ ಕ್ರಮ ವಹಿಸಲು ಸೂಚಿಸಿದರು.

ಇದೇ ಸಂದರ್ಭದಲ್ಲಿ ಗೃಹ ಆರೋಗ್ಯಕ್ಕೆ ಸಂಬಂಧಿಸಿದ ಕೈಪಿಡಿ ಬಿಡುಗಡೆ ಮಾಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅನಿಲ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಚೇತನ್, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ನಾಗಪ್ಪ ಉಪಸ್ಥಿತರಿದ್ದರು.

## ಅರ್ಥಪೂರ್ಣ ಸ್ವಾತಂತ್ರ್ಯ ದಿನಾಚರಣೆಗೆ ನಿರ್ದೇಶನ

ಸ್ವಾತಂತ್ರ್ಯ ದಿನಾಚರಣೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಸ್ವಾತಂತ್ರ್ಯ ದಿನಾಚರಣೆ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಸುರಕ್ಷತೆಗೆ ಆದ್ಯತೆ ನೀಡಬೇಕು. ಅಲಂಕಾರಕ್ಕೆ ಪ್ಲಾಸ್ಟಿಕ್ ಬಳಕೆ ಮಾಡುವಂತಿಲ್ಲ. ಪ್ಲಾಸ್ಟಿಕ್ ಬಾವುಟ ಮಾರಾಟವಾಗದಂತೆ ನಿಗಾವಹಿಸಿ ಎಂದರು.

ಆ. 15ರ ಬೆಳಿಗ್ಗೆ 8 ಗಂಟೆಯೊಳಗೆ ತಮ್ಮ ತಮ್ಮ ಕಚೇರಿಯಲ್ಲಿ ಧ್ವಜಾರೋಹಣ ನೆರವೇರಿಸಿ ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದ ಹಾಕಿ ಮೈದಾನದಲ್ಲಿ ಜರುಗುವ ಸ್ವಾತಂತ್ರ್ಯ ದಿನಾಚರಣೆಯಲ್ಲಿ ತಪ್ಪದೇ ಭಾಗವಹಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮಹಾತ್ಮ ಗಾಂಧೀಜಿ ಅವರ ಭಾವಚಿತ್ರದೊಂದಿಗೆ ಸಂವಿಧಾನ ಪಿತಾಮಹ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರವನ್ನು ಕಡ್ಡಾಯವಾಗಿ ಇಡುವಂತೆ ಸೂಚಿಸಿದರಲ್ಲದೆ, ಎಲ್ಲಾ ಸರ್ಕಾರಿ ಕಟ್ಟಡಗಳಲ್ಲಿ ಆ. 14 ಮತ್ತು 15 ರಂದು ದೀಪಾಲಂಕಾರ ವ್ಯವಸ್ಥೆ ಮಾಡಲು ಹೇಳಿದರು.

ಜಿಲ್ಲೆಯ ಪ್ರತಿಯೊಂದು ಶಾಲಾ ಮಕ್ಕಳಿಗೆ ಸ್ವಾತಂತ್ರ್ಯ ಚಳವಳಿಯ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಚರ್ಚಾ ಸ್ಪರ್ಧೆ ಏರ್ಪಡಿಸಬೇಕು.

ಶಾಲಾ ಮಕ್ಕಳಿಗೆ ಅಂದು ಕಾರ್ಯಕ್ರಮದಲ್ಲಿ ವಿತರಿಸುವ ಸಿಹಿ ಪದಾರ್ಥಗಳನ್ನು ಸೇವನೆ ಮಾಡಿದ ನಂತರ ಕವರ್‌ಗಳನ್ನು ಎಲ್ಲೆಂದರಲ್ಲಿ ಬಿಸಾಡದಂತೆ ಶಾಲಾ ಹಂತದಲ್ಲಿಯೇ ಮುಂಚಿತವಾಗಿಯೇ ತಿಳಿಸುವ ನಿಟ್ಟಿನಲ್ಲಿ ಸುತ್ತೋಲೆ ಹೊರಡಿಸುವಂತೆ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸೂಚನೆ ನೀಡಿದರು.

ಸ್ವಾತಂತ್ರ್ಯ ಹೋರಾಟಗಾರ ಹೆಚ್.ಎಂ. ಶಿವಣ್ಣ, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ಗಿರೀಶ್, ಮಹಾನಗರ ಪಾಲಿಕೆ ಆಯುಕ್ತ ಕೃಷ್ಣಮೂರ್ತಿ, ಉಪವಿಭಾಗಾಧಿಕಾರಿ ಮಾರುತಿ ಹಾಗೂ ಇತರರಿದ್ದರು.

# ಕೆರೆಗೆ ಕಲುಷಿತ ನೀರು ತಿಂಗಳಲ್ಲಿ ಆರು ಹಸು ಸಾವು


ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕೆರೆಗೆ ಕಾರ್ಖಾನೆಯ ಕಲುಷಿತ ನೀರು ಬಿಡುತ್ತಿರುವುದರಿಂದ ಒಂದು ತಿಂಗಳಲ್ಲಿ ಆರು ಹಸುಗಳು ಮೃತಪಟ್ಟಿದ್ದು ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಜರುಗಿಸಬೇಕು ಎಂದು ತಾಲ್ಲೂಕಿನ ಸಮುದ್ರವಳ್ಳಿ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಸೋಮವಾರ ಬೆಳಿಗ್ಗೆ ಗ್ರಾಮದ ಕುಮಾರ್ ಎಂಬುವರ ಹಸು ಮೃತಪಟ್ಟಿದೆ. ಅದರಿಂದ ಆಕ್ರೋಶಗೊಂಡ ಸ್ಥಳೀಯರು ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ಅಧಿಕಾರಿ ಹಾಗೂ ಕೈಗಾರಿಕೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಉಪ್ಪಿನಕಾಯಿ ತಯಾರಿಕಾ ಫ್ಯಾಕ್ಟರಿಯಿಂದ ಕಳೆದ ನಾಲ್ಕು ತಿಂಗಳಿಂದ ಈ ರೀತಿ ಸಮಸ್ಯೆಯಾಗುತ್ತಿದೆ. ಗ್ರಾಮಸ್ಥರೆಲ್ಲರೂ ಸೇರಿ ಮನವಿ ಸಲ್ಲಿಸಿದಾಗ ಕೆರೆಗೆ ನೀರು ಬಿಡುವುದಿಲ್ಲವೆಂದು ಹೇಳುವ ಅಧಿಕಾರಿಗಳು ರಾತ್ರೋರಾತ್ರಿ ಕೃತ್ಯ ಎಸಗುತ್ತಾರೆ. ಹೀಗಾಗಿ ಕೆರೆ ನೀರು ಸಂಪೂರ್ಣ ಕಂದು ಬಣ್ಣಕ್ಕೆ ತಿರುಗಿದೆ. ನೀರು ಹದಗೆಟ್ಟ ಪರಿಣಾಮ ಮೀನುಗಳು ಸಾವನ್ನಪ್ಪಿವೆ ಎಂದು ಕುಮಾರ್ ಅವರು ಆರೋಪಿಸಿದರು.

ಕೆರೆ ಪಕ್ಕದಲ್ಲೇ ಬೋರವೆಲ್ ಇದ್ದು ಕುಡಿಯುವ ನೀರಿಗೆ




ಆಧಾರವಾಗಿದೆ. ಆದರೆ ಫ್ಯಾಕ್ಟರಿಯವರ ಅವೈಜ್ಞಾನಿಕ ನೀತಿಗೆ ಆ ನೀರು ಕಲುಷಿತಗೊಂಡಿದ್ದು ಸಾಂಕ್ರಾಮಿಕ ಕಾಯಿಲೆಗಳ ಭೀತಿ ಕಾಡುತ್ತಿದೆ. ಕೈಗಾರಿಕಾ ಅಭಿವೃದ್ಧಿ ಅಧಿಕಾರಿಗಳಿಗೆ ಈ ಬಗ್ಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ ಎಂದರು.

ಗ್ರಾಮದ ರಮೇಶ್, ಸ್ವಾಮಿ, ಬೆಟ್ಟೇಗೌಡ, ರಾಜಣ್ಣ, ಗೌರಮ್ಮ ಇತರರಿದ್ದರು.

# ಮರಕ್ಕೆ ಕಾರು ಡಿಕ್ಕಿಯಾಗಿ ಚಾಲಕ ಸಾವು

ಅರಕಲಗೂಡು: ತಾಲ್ಲೂಕಿನ ಹಿರೇಹಳ್ಳಿ ಬಳಿ ತೆಂಗಿನ ಮರಕ್ಕೆ ಕಾರು ಡಿಕ್ಕಿ ಹೊಡೆದ ಪರಿಣಾಮ ಓರ್ವ ಸ್ಥಳದಲ್ಲೇ ಮೃತಪಟ್ಟು, ಮೂವರು ಗಾಯಗೊಂಡಿದ್ದಾರೆ.

ತಾಲೂಕಿನ ಹೊನ್ನವಳ್ಳಿ ಗ್ರಾಮದ ಭೈರ (35) ಮೃತ ವ್ಯಕ್ತಿ. ಸ್ವಿಫ್ಟ್ ಕಾರಿನಲ್ಲಿ ಹೊನ್ನವಳ್ಳಿ ಗ್ರಾಮ ದಿಂದ ನಾಲ್ವರು ಮೈಸೂರಿಗೆ ತೆರಳುತ್ತಿದ್ದರು. ಟೆಂಪೋ ಟ್ರಾವೆಲ್ಸ್ ಮಾಲೀಕ ಭೈರ ಕಾರು



ಚಲಾಯಿಸುತ್ತಿದ್ದ. ಹಿರೇಹಳ್ಳಿ ಗ್ರಾಮದ ಬಳಿ ರಾಜ್ಯ ಹೆದ್ದಾರಿಯಲ್ಲಿ ಎದುರಿನಿಂದ ಬಂದ ಬೈಕ್‌ಗೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಹೋಗಿ ತೆಂಗಿನ ಮರಕ್ಕೆ ಕಾರು ಗುದ್ದಿದೆ. ತೆಂಗಿನ ಮರಕ್ಕೆ ಡಿಕ್ಕಿ ಹೊಡೆದು ಕಾರು ಪಲ್ಟಿಯಾಗಿ ನಜ್ಜುಗುಜ್ಜಾಗಿದೆ. ಭೈರ ಸ್ಥಳದಲ್ಲೇ ಮೃತಪಟ್ಟರೆ ಮೂವರು ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಅರಕಲಗೂಡು ತಾಲ್ಲೂಕು ಆಸ್ಪತ್ರೆಗೆ ದಾಖಲು ಮಾಡಲಾಗಿದ್ದು, ಗಂಭೀರ ಗಾಯಾಳುಗಳನ್ನು ಹಿಮ್ಸ್‌ಗೆ ದಾಖಲಿಸಲಾಗಿದೆ. ಕೊಣನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಿದ್ದರಾಮಯ್ಯ ಕಾಂಗ್ರೆಸ್ ಶಾಸಕರಿಗಷ್ಟೇ ಸಿಎಂ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ಕಾಂಗ್ರೆಸ್ ಶಾಸಕರಿಗೆ 50 ಕೋಟಿ ರೂ. ಬೇರೆ ಪಕ್ಷದವರಿಗೆ 25 ಕೋಟಿ ರೂ. ಅನುದಾನ ಘೋಷಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾಂಗ್ರೆಸ್ ಶಾಸಕರಿಗೆ ಮಾತ್ರ ಮುಖ್ಯಮಂತ್ರಿ ಎಂಬಂತೆ ವರ್ತಿಸಿದ್ದಾರೆ ಎಂದು ಶಾಸಕ ಎ. ಮಂಜು ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗಾರರೊಂದಿಗೆ ಸೋಮವಾರ ಮಾತನಾಡಿ, ಅಭಿವೃದ್ಧಿ ದೃಷ್ಟಿಯಿಂದ 224 ವಿಧಾನಸಭಾ ಕ್ಷೇತ್ರಕ್ಕೂ ಸಮಾನ ಅನುದಾನ ನೀಡುವುದು ರಾಜ್ಯದ ಮುಖ್ಯಮಂತ್ರಿಯ ಶಾಸನಬದ್ಧ ಕೆಲಸ. ಆದರೆ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಶಾಸಕರಿಗೆ 50 ಕೋಟಿ ರೂ. ಮತ್ತು ಇತರ ಪಕ್ಷದ ಶಾಸಕರಿಗೆ ಕೇವಲ 25 ಕೋಟಿ ರೂ. ಘೋಷಿಸಿ ತಾರತಮ್ಯ ಮಾಡಿದ್ದಾರೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯಕ್ಕೆ ಮುಖ್ಯಮಂತ್ರಿನಾ ಅಥವಾ ಕಾಂಗ್ರೆಸ್ ಮುಖ್ಯಮಂತ್ರಿನಾ ಎಂಬುದನ್ನು ಮೊದಲು ಹೇಳಬೇಕು. ಕಾಂಗ್ರೆಸ್‌ಗೆ ಮುಖ್ಯಮಂತ್ರಿ ಎಂದಾದರೇ ನಾವು ಅವರನ್ನು ಪ್ರಶ್ನಿಸುವುದಿಲ್ಲ. ಅವರು ಕಾಂಗ್ರೆಸ್ ಪಕ್ಷಕ್ಕೆ ನಾಯಕರು ಅಷ್ಟೇ. ಅಭಿವೃದ್ಧಿ ಎಂಬುದು ಇಡೀ ರಾಜ್ಯಕ್ಕೆ ಸಮಾನಾಗಿರಬೇಕೆಂಬುದು ನನ್ನ



ಅಭಿಪ್ರಾಯ ಎಂದರು.

ಕಾಂಗ್ರೆಸ್ ಶಾಸಕರಿಗೆ ನೀಡಿರುವಂತೆಯೇ ನಮಗೂ ಅಷ್ಟೇ ಅನುದಾನ ಕೊಡಬೇಕು. ನಮಗೆ ನೀಡಿರುವ 25 ಕೋಟಿ ರೂ.ನಲ್ಲಿ ಶೇ. 50ರಷ್ಟು ಲೋಕೋಪಯೋಗಿ ಇಲಾಖೆಗೆ ಮತ್ತು 15 ಕೋಟಿ ರೂ. ಜಿಲ್ಲಾ ಪಂಚಾಯಿತಿ ಇತರೆ ಇಲಾಖೆಗೆ ಮೀಸಲಾಗಿದೆ. ಉಳಿದದ್ದು ಕೇವಲ 10 ಕೋಟಿ ರೂ. ಅದರಿಂದ ಇಡೀ ವಿಧಾನಸಭಾ ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿಯನ್ನು ಕೈಗೊಳ್ಳಲು ಸಾಧ್ಯವಾಗುವುದಿಲ್ಲ. ಎರಡು ವರ್ಷಗಳ ಬಳಿಕ ಶಾಸಕರಿಗೆ ಅನುದಾನ ನೀಡಿರುವುದನ್ನು ಸ್ವಾಗತಿಸುತ್ತೇನೆ. ಆದರೆ ಸಮಾನವಾಗಿ ಅನುದಾನ ಹಂಚಿಕೆ ಮಾಡಬೇಕು ಎಂದು ಆಗ್ರಹಿಸಿದರು.

# ಹಾಸನದಲ್ಲಿ ಓಲಾ-ಬೈಕ್ ಟ್ಯಾಕ್ಸಿ ನಿಷೇಧಕ್ಕೆ ಆಗ್ರಹಿಸಿ ಪ್ರತಿಭಟನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲಾದ್ಯಂತ ಓಲಾ, ಉಬರ್, ರಾಪಿಡೋ, ಬೈಕ್ ಟ್ಯಾಕ್ಸಿ ಅಗ್ರಿಗೇಟರ್‌ಗಳನ್ನು ನಿಷೇಧಿಸಬೇಕು ಎಂದು ಆಗ್ರಹಿಸಿ ಆಟೋ ಚಾಲಕರ ಮಜ್ದೂರ್ ಸಂಘದಿಂದ ಸೋಮವಾರ ಜಿಲ್ಲಾಧಿಕಾರಿ ಕಚೇರಿ ಎದುರು ಮೌನ ಪ್ರತಿಭಟನೆ ನಡೆಸಲಾಯಿತು.

ಸಂಘದ ರಾಜ್ಯ ಉಪಾಧ್ಯಕ್ಷ ಹೆಚ್.ಕೆ. ದಿಲೀಪ್ ಕುಮಾರ್ ಮತ್ತು ಜಿಲ್ಲಾಧ್ಯಕ್ಷ ಜಾನಿ ಮಾತನಾಡಿ, ಆಟೋ ಚಾಲಕರು ಅಸಂಘಟಿತ ಕಾರ್ಮಿಕ ವರ್ಗಕ್ಕೆ ಸೇರಿದ್ದು, ಸಮಾಜದಲ್ಲಿ ಯಾವುದೇ ಸವಲತ್ತು ಸಿಗದೇ ನಿರುದ್ಯೋಗಿಯಾಗಿದ್ದೇವೆ ಎಂದರು.

ಜೀವನೋಪಾಯಕ್ಕಾಗಿ ಆಟೋ ರಿಕ್ಷಾ ಚಾಲಕರಾಗಿ ಜೀವನ ಸಾಗಿಸುತ್ತಿದ್ದೇವೆ.



ಇತ್ತೀಚೆಗೆ ಖಾಸಗಿ ಆಪ್ ಮತ್ತು ಅಗ್ರಿಗೇಟರ್ ಹೆಸರಿನಲ್ಲಿ ನಮ್ಮನ್ನು ಮತ್ತು ಸಾರ್ವಜನಿಕರನ್ನು ದೋಚುವ ಕೆಲಸ ನಡೆಯುತ್ತಿದೆ. ನಮ್ಮ ಕುಟುಂಬ ನಿರ್ವಹಣೆ ಮತ್ತು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಆಟೋ ಚಾಲನೆ ವೃತ್ತಿಯನ್ನೇ ಅವಲಂಬಿಸಿದ್ದೇವೆ ಎಂದರು.

ಇಷ್ಟು ವರ್ಷಗಳ ನಂತರ ಮಧ್ಯವರ್ತಿಗಳಾಗಿ ಕೆಲಸ ನಿರ್ವಹಿಸುತ್ತಿರುವ ಓಲಾ, ಉಬರ್, ರಾಪಿಡೋ, ಬೈಕ್ ಟ್ಯಾಕ್ಸಿ ಅಗ್ರಿಗೇಟರ್ ಗಳನ್ನು ನಿಷೇಧಿಸಿ ಎಂಬ ಆದೇಶ ಇದ್ದರೂ ಹಾಗೂ ಸರ್ಕಾರ ಹಾಗೂ ನ್ಯಾಯಾಲಯ ತೀರ್ಪಿನ ಮೇರೆಗೆ ಖಾಸಗಿ ಸಂಸ್ಥೆಗಳನ್ನು ರಾಜ್ಯಾದ್ಯಂತ ನಿಷೇಧಿಸಲಾಗಿದೆ ಆದರೂ ಕೆಲವು ಅಗ್ರಿಗೇಟರ್ ಕಂಪನಿಗಳು ನಮ್ಮ ಜಿಲ್ಲೆಗೆ ಆಪ್ ಮುಖಾಂತರ ಕೆಲವು ಕಂಪನಿಗಳು ಅನಧಿಕೃತವಾಗಿ ನಮ್ಮ ಆಟೋ ಚಾಲಕರಿಗೆ ಹಣದ ಆಸೆ ತೋರಿಸಿ ಆಫ್ ಡೌನ್ಲೋಡ್ ಮಾಡಿ ನಮ್ಮ ಆಟೋ ಚಾಲಕರ ವಿರುದ್ಧವಾಗಿ ಸಮಸ್ಯೆ ಮತ್ತು ವೈಮನಸ್ಯ ಉಂಟು ಮಾಡುತ್ತಿದ್ದು, ಅದರಿಂದ ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಅಹಿತಕರ ಘಟನೆ ಹಾಗೂ ಕಾನೂನು ಭಂಗವಾದರೆ ಖಾಸಗಿ ಕಂಪನಿಗಳೇ ನೇರ ಹೊಣೆ. ಸಮಾಜಮುಖಿ ಕೆಲಸ ನಿರ್ವಹಿಸುವ ನಮ್ಮನ್ನು( ಆಟೋ ಚಾಲಕರನ್ನು) ಪರಿಗಣಿಸಿ ಖಾಸಗಿ ಮಧ್ಯವರ್ತಿಗಳನ್ನು ನಿಷೇಧಿಸಬೇಕಾಗಿ ವಿನಂತಿಸಿದರು.

ಹಾಸನದಲ್ಲಿ 4000 ಆಟೋ ಚಾಲಕರು ಕಾರ್ಯನಿರ್ವಹಿಸುತ್ತಿದ್ದು, ಸಾರಿಗೆ ಇಲಾಖೆಯಲ್ಲಿ ಒಂದು ಸೇವಾ ಕೇಂದ್ರವನ್ನು ಆಟೋ ಚಾಲಕರಿಗೆ ಮಾಡಿಕೊಡಬೇಕು. ಆಟೋ ಮೀಟರ್ ಅಧಿಕಾರಿಯನ್ನು ಹಾಸನಕ್ಕೆ ನಿಯೋಜನೆ ಮಾಡಲಾಗಿದ್ದು, ಆದರೆ ಅವರಿಗೆ ಅಧಿಕ ಹೊರೆಯಿದೆ ಎಂದು ಹೇಳುತ್ತಾರೆ. ವಾರಕ್ಕೆ ಎರಡು ದಿನ ಮಾತ್ರ ಮಾಪನ ಮುದ್ರೆ ಮಾಡುತ್ತಿದ್ದು, 4000 ಆಟೋ ಚಾಲಕರಿಗೆ ಜಿಲ್ಲೆಯಲ್ಲಿ ತುಂಬಾ ತೊಂದರೆ ಆಗಿರುವುದರಿಂದ ಅದಕ್ಕಾಗಿ ಪ್ರತಿನಿತ್ಯ ಮಾಪನಕ್ಕೆ ಆದೇಶ ನೀಡಬೇಕಾಗಿ ಕೋರಿದರು.

ಹೊಳೆನರಸೀಪುರ ತಾಲ್ಲೂಕು ಅಧ್ಯಕ್ಷ ಚೇತನ್, ಉಪಾಧ್ಯಕ್ಷ ಸುನೀಲ್, ಸದಸ್ಯ ದಿನಾಕರ್, ಪಾಲರಾಜು, ನಿರಂಜನ್, ಹಾಸನ ಪ್ರಧಾನ ಕಾರ್ಯದರ್ಶಿ ಯಶವಂತ್, ಕಾರ್ಯದರ್ಶಿ ಹರೀಶ್, ಸತೀಶ್, ರಂಗನಾಥ್, ಕಾನೂನು ಸಲಹೆಗಾರ ಅಶೋಕ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆನಂದ್ ಇತರರಿದ್ದರು.

# ಕಚೇರಿಯಲ್ಲಿ ಖಾಸಗಿ ವ್ಯಕ್ತಿ ಹುಟ್ಟುಹಬ್ಬ: ಮೂವರ ಅಮಾನತು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಇಲ್ಲಿನ ಸಹಾಯಕ ಪ್ರಾದೇಶಿಕ ಸಾರಿಗೆ ಕಚೇರಿಯಲ್ಲಿ ಖಾಸಗಿ ವ್ಯಕ್ತಿಯ ಹುಟ್ಟುಹಬ್ಬ ಆಚರಿಸಿದ್ದ ಪ್ರಕರಣಕ್ಕೆ ಸಂಬಂಧಿಸಿ ಎಆರ್‌ಟಿಒ ಎಸ್.ಎನ್. ಮಧುರಾ, ಕಚೇರಿ ಅಧೀಕ್ಷಕ ಎಂ.ಕೆ. ಗಿರೀಶ್, ಮೋಟಾರು ವಾಹನ ನಿರೀಕ್ಷಕಿ ಎನ್. ಆರ್. ಆಶಾ ಅವರನ್ನು ಅಮಾನತು ಮಾಡಿ ಸಾರಿಗೆ ಮತ್ತು ಶಿಸ್ತು ಪ್ರಾಧಿಕಾರ ಆಯುಕ್ತ ಎ.ಎಂ. ಯೋಗೀಶ್ ಸೋಮವಾರ ಆದೇಶಿಸಿದ್ದಾರೆ.



ಜು. 11ರ ಶುಕ್ರವಾರ ಡ್ರೈವಿಂಗ್ ಶಾಲೆ ಮುಖ್ಯಸ್ಥ ಮೋಹನ್ ಶೆಟ್ಟಿ ಎಂಬುವರ ಹುಟ್ಟುಹಬ್ಬವನ್ನು ಕಚೇರಿಯಲ್ಲಿ ಆಚರಿಸಲಾಗಿತ್ತು. ಈ ಸಂಬಂಧ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದ್ದವು. ಕರ್ತವ್ಯ ಲೋಪ ಎಸಗಿದ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಬೇಕೆಂದು ವಿವಿಧ ಸಂಘಟನೆಗಳು ಪ್ರತಿಭಟನೆ ನಡೆಸಿದ್ದವು. ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದ

ಪ್ರಕರಣ ಕುರಿತು ಸ್ಪಷ್ಟನೆ ಕೋರಿದ್ದ ಮೇಲಧಿಕಾರಿಗಳಿಗೆ ಎಆರ್‌ಟಿಒ ಎಸ್.ಎನ್. ಮಧುರಾ ಅವರು ನೀಡಿದ ಸಮಜಾಯಿಷಿಯಲ್ಲಿ ಖಾಸಗಿ ವ್ಯಕ್ತಿ ಮೋಹನ್ ಶೆಟ್ಟಿ ಅವರನ್ನು ವಹಿಸಿಕೊಂಡಿದ್ದಾರೆ.

ಆ ವ್ಯಕ್ತಿ ಡ್ರೈವಿಂಗ್ ಶಾಲೆಯ ಮುಖ್ಯಸ್ಥರಾಗಿದ್ದು, ಕಚೇರಿ ಆವರಣದ ಗೇಟ್ ಹಾಗೂ ಬೀಗದ ವ್ಯವಸ್ಥೆ ಉಚಿತವಾಗಿ ನೀಡಿದ ದಾನಿಗಳಾಗಿದ್ದಾರೆ. ಶುಕ್ರವಾರ ಎಂದಿನಂತೆ ಪೂಜೆ ಮಾಡುತ್ತಿದ್ದೆವು. ಮೋಹನ್ ಶೆಟ್ಟಿ ಅವರ ಹುಟ್ಟುಹಬ್ಬ ಹಾಗು ಕಚೇರಿಯಲ್ಲಿ ಆಚರಿಸುವ ಕುರಿತು ಮಾಹಿತಿ ಇರಲಿಲ್ಲ. ಏಕಾಏಕಿ ಕೇಕ್, ಶಾಲು, ಹಾರ ತಂದಿದ್ದರು. ನಾನು ಅವರಿಗೆ ಜನ್ಮದಿನದ ಶುಭಾಶಯ ಕೋರಿದ್ದೇನೆ ಹೊರತು ಸಂಭ್ರಮಾಚರಣೆಯಲ್ಲಿ ಪಾಲ್ಗೊಂಡಿಲ್ಲವೆಂದು ಪ್ರತಿಕ್ರಿಯಿಸಿದ್ದಾರೆ.

ಎಆರ್‌ಟಿಒ ಹಾಗೂ ಇತರ ಇಬ್ಬರು ನೌಕರರ ಸಮಜಾಯಿಷಿಯನ್ನು ಪರಿಶೀಲಿಸಿದ ಮೇಲಧಿಕಾರಿಗಳು, ಸಂಭ್ರಮಾಚರಣೆಯಲ್ಲಿ ಭಾಗವಹಿಸಿದ್ದನ್ನು ಪರಿಗಣಿಸಿ ಅಮಾನತು ಮಾಡಿದ್ದಾರೆ.

# ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕಾರ್ಯ ಅನನ್ಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಾಮಾಜಿಕ ಕಾರ್ಯಕ್ರಮಗಳು ಜನಪರವಾಗಿವೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಪುರ ಗ್ರಾಮದ ಕೆರೆಯಂಗಳದಲ್ಲಿ ಸೋಮವಾರ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ನಮ್ಮ ಊರು-ನಮ್ಮ ಕೆರೆ ಕಾರ್ಯಕ್ರಮದಡಿ 12.40 ಲಕ್ಷ ರೂ. ವೆಚ್ಚದಲ್ಲಿ ಕೈಗೊಂಡಿರುವ ಕೆರೆ ಹೂಳೆತ್ತುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು.

ಗ್ರಾಮೀಣ ಭಾಗಕ್ಕೆ ಅಗತ್ಯವಿರುವ ಸಮುದಾಯ ಭವನ, ಹಾಲು ಉತ್ಪಾದಕರ ಸಹಕಾರ ಸಂಘಗಳ ಕಟ್ಟಡ ನಿರ್ಮಾಣ, ಶುದ್ಧ ನೀರಿನ ಘಟಕ ಹಾಗೂ ದೇಗುಲ ಜೀರ್ಣೋದ್ಧಾರ ಕಾರ್ಯಗಳಿಗೆ ಸಹಾಯಧನ ರೂಪದಲ್ಲಿ ಕೊಡುಗೆ ನೀಡುತ್ತಿದೆ ಎಂದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಗ್ರಾಮೀಣ ಭಾಗದ ಅಭಿವೃದ್ಧಿಗೆ ಹೆಚ್ಚಿನ ಮಟ್ಟದಲ್ಲಿ ಕೈ ಜೋಡಿಸಿದೆ. ಕೃಷಿ, ಜನ-ಜಾನುವಾರುಗಳಿಗೆ ಕೆರೆಗಳ ಅವಶ್ಯಕತೆ ಹೆಚ್ಚಿದೆ ಎಂಬುದನ್ನು ಅರಿತು ಹೂಳೆತ್ತುವ ಕಾರ್ಯ ಕೈಗೊಂಡಿದೆ ಎಂದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಸತೀಶ್ ಸುವರ್ಣ ಮಾತನಾಡಿ, 43 ವರ್ಷಗಳಿಂದ ರಾಜ್ಯಾದ್ಯಂತ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದು ಒಂದು ಗ್ರಾಮ ಸುವ್ಯವಸ್ಥೆಯಿಂದ



ಕೂಡಿರಲು ಅಗತ್ಯವಿರುವ ಎಲ್ಲಾ ಕಾಮಗಾರಿಗೆ ಯೋಜನೆ ರೂಪಿಸಿ ಅಭಿವೃದ್ಧಿಗೊಳಿಸುವಲ್ಲಿ ಗ್ರಾಮಾಭಿವೃದ್ಧಿ ಯೋಜನೆಯು ಹಗಲಿರುಳು ಶ್ರಮಿಸುತ್ತಿದೆ. ಇದೂವರೆಗೂ ರಾಜ್ಯದಲ್ಲಿ 900 ಹಾಗೂ ತಾಲ್ಲೂಕಿನಲ್ಲಿ 8ಕ್ಕೂ ಹೆಚ್ಚು ಕೆರೆಗಳನ್ನು ಹೂಳೆತ್ತಿ ಅಭಿವೃದ್ಧಿಗೊಳಿಸಲಾಗಿದೆ ಎಂದರು.

ಶ್ರೀ ರುದ್ರೇಶ ಸ್ವಾಮೀಜಿ ಪೂಜೆ ನೆರವೇರಿಸಿದರು. ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಎಂ.ಆರ್. ವಾಸು, ಗ್ರಾಮ ಪಂಚಾಯಿತಿ ಅಧ್ಯಕ್ಷ ದಿನೇಶ್, ಉಪಾಧ್ಯಕ್ಷೆ ಸಾವಿತ್ರಮ್ಮ, ಸದಸ್ಯರಾದ ಪಿ.ಕೆ. ಶಿವಶಂಕರ್, ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯರಾದ ಮಲ್ಲೇಗೌಡ, ಇಂದ್ರಜಿತ್, ಕೆರೆ ಅಭಿವೃದ್ಧಿ ಸಮಿತಿ ಅಧ್ಯಕ್ಷ ಕೆ.ಚಂದ್ರಣ್ಣ, ದಿಡಗ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕೆ.ಎಸ್. ಪ್ರಕಾಶ್, ಯೋಜನೆ ತಾಲ್ಲೂಕು ಕೃಷಿ ಅಧಿಕಾರಿ ದಿನೇಶ್, ವಲಯ ಮೇಲ್ವಿಚಾರಕ ಹರೀಶ್, ಸೇವಾ ಪ್ರತಿನಿಧಿ ಪುಷ್ಪಲತಾ, ಪ್ರಗತಿ ಬಂಧು ಸ್ವ-ಸಹಾಯ ಸಂಘಗಳ ಸದಸ್ಯರು ಹಾಗೂ ಗ್ರಾಮಸ್ಥರು ಇದ್ದರು.

# ಮಿಲೇನಿಯಮ್ ವರ್ಲ್ಡ್ ಶಾಲೆಯಲ್ಲಿ 5 ದಿನ ಈಜು ಸ್ಪರ್ಧೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಚಿಕ್ಕಕೊಂಡಗೊಳ ಕೊಪ್ಪಲಿನಲ್ಲಿರುವ ಮಿಲೇನಿಯಮ್ ವರ್ಲ್ಡ್ ಶಾಲೆಯಲ್ಲಿ ಜು. 23 ರಿಂದ 27ರ ವರೆಗೆ ದಕ್ಷಿಣ ವಲಯ-11ರ ಈಜು ಸ್ಪರ್ಧೆ ಏರ್ಪಡಿಸಲಾಗಿದೆ ಎಂದು ಶಾಲೆಯ ನಿರ್ದೇಶಕ ಕೀರ್ತಿ ಪ್ರಸಾದ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಕರ್ನಾಟಕ, ಕೇರಳ, ಗೋವಾ, ಮಹಾರಾಷ್ಟ್ರ ಸೇರಿ 4 ರಾಜ್ಯಗಳ 4 ಸಾವಿರ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ. ಇಲ್ಲಿ




ವಿಜೇತರಾಗುವ ವಿದ್ಯಾರ್ಥಿಗಳು ರಾಷ್ಟ್ರ ಮಟ್ಟದ ಸ್ಪರ್ಧೆಗೆ ಅರ್ಹರಾಗುತ್ತಾರೆಂದರು.

ಜು. 22ರ ಬೆಳಿಗ್ಗೆ 9.30 ರಿಂದ ಸಂಜೆ 6ರ ವರೆಗೆ ವರದಿ ಮಾಡಿಕೊಳ್ಳಬೇಕು. ಈಜು ಸ್ಪರ್ಧೆಯು ವೈಯಕ್ತಿಕ ಸ್ಪರ್ಧೆ-94, 16 ರಿಲೇ ಈವೆಂಟ್ ಹೊಂದಿದೆ. ನಮ್ಮೊಂದಿಗೆ ಕರ್ನಾಟಕ ಈಜು ಸಂಸ್ಥೆ ಹಾಗು ಸಿಬಿಎಸ್‌ಸಿ ನೇಮಿಸಿದ ಕ್ರೀಡಾ ವೀಕ್ಷಕರ ನೇತೃತ್ವದಲ್ಲಿ ಸ್ಪರ್ಧೆ ನಡೆಸಲಾಗುವುದು ಎಂದರು.

11 ವರ್ಷದಿಂದ 14, 17 ಮತ್ತು 19 ವರ್ಷದೊಳಗಿನವರು ಸ್ಪರ್ಧೆಯಲ್ಲಿ ಭಾಗವಹಿಸುವರು, ಸ್ಪರ್ಧೆಯಲ್ಲಿ ಭಾಗಿಯಾಗುವವರಿಗೆ ಮತ್ತು ಕೋಚ್‌ಗಳಿಗೆ ಸಾರಿಗೆ, ಭೋಜನ, ಉಚಿತ ವಸತಿ ವ್ಯವಸ್ಥೆ ಮಾಡಲಾಗಿದೆ. ಜಿಲ್ಲಾ ಕ್ರೀಡಾಂಗಣದ ಒಳಾಂಗಣ ಕ್ರೀಡಾಂಗಣದ ಈಜುಕೊಳದಲ್ಲಿ ವಾರ್ಮ್‌ಅಪ್‌ಗೆ ಅವಕಾಶ ನೀಡಲಾಗಿದೆ. ಸುಮಾರು 100ಕ್ಕೂ ಹೆಚ್ಚು ಈವೆಂಟ್ ನಮ್ಮ ಶಾಲೆಯ ಆವರಣದಲ್ಲಿರುವ ಶಾಲೆಯ ಆವರಣದಲ್ಲೇ ನಡೆಯಲಿದೆ ಎಂದರು.

# ಪರಸ್ಪರ ಸ್ನೇಹ ಸೌಹಾರ್ದತೆ ಬೆಳೆಸುವಲ್ಲಿ ರೋಟರಿ ಪಾತ್ರ ಶ್ಲಾಘನೀಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸ್ವಸ್ಥ ಸಮಾಜ ಹಾಗೂ ಪ್ರತಿಯೊಬ್ಬರಲ್ಲೂ ಸ್ನೇಹ ಮನೋಭಾವ ಮೂಡಿಸುವ ಕಾರ್ಯದಲ್ಲಿ ರೋಟರಿ ಪಾತ್ರ ದೊಡ್ಡದು ಎಂದು ಜಿಲ್ಲಾ ರೋಟರಿ ಸಂಸ್ಥಾಪನ ಸಮಿತಿ ನಿರ್ದೇಶಕ ಹಾಗೂ ರೋಟರಿ ಮಾಜಿ ಜಿಲ್ಲಾ ಗವರ್ನರ್ ಡಿ.ಎಸ್. ರವಿ ಅಭಿಪ್ರಾಯಪಟ್ಟರು.

ನಗರದ ಖಾಸಗಿ ಸಮುದಾಯ ಭವನದಲ್ಲಿ ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ವತಿಯಿಂದ ನಡೆದ 2025-26ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರೋಟರಿ ಸಂಸ್ಥೆಯು ಒಂದು ಅಂತಾರಾಷ್ಟ್ರೀಯ ಸಂಸ್ಥೆಯಾಗಿದ್ದು, ಪ್ರತಿಯೊಬ್ಬರಲ್ಲೂ ಸ್ನೇಹ ಮನೋಭಾವನೆ ಮೂಡಿಸುವ ಕಾರ್ಯದಲ್ಲಿ ರೋಟರಿ ಸಂಸ್ಥೆ ತೊಡಗಿಕೊಂಡು ಬರುತ್ತಿದೆ. ಜೊತೆಗೆ ಇಡೀ ವಿಶ್ವದ ತಲೆನೋವಾಗಿದ್ದ ಪೋಲಿಯೋ ಕಾಯಿಲೆಯನ್ನು ನಿರ್ಮೂಲನೆ ಮಾಡುವಲ್ಲಿ ರೋಟರಿಯ ಪಾತ್ರ ದೊಡ್ಡದು. ಪರಿಸರ ಸಮತೋಲನಕ್ಕಾಗಿ ರೋಟರಿ ಪ್ರತಿವರ್ಷ ಹೊಸ ಯೋಜನೆಗಳನ್ನು ಹಾಕಿಕೊಂಡು ಪರಿಸರ ಸಂರಕ್ಷಣೆ ಮಾಡಲಾಗುತ್ತಿದೆ.




ರೋಟರಿ ಸಂಸ್ಥೆಯ ಪದಾಧಿಕಾರಿಗಳು ಮುಂದಿನ ದಿನಗಳಲ್ಲಿ ಶಾಲಾ ಕಾಲೇಜು ಹಂತಗಳಲ್ಲಿ ರೋಟರಿ ಉಪ ಶಾಖೆಗಳನ್ನು ತೆರೆಯುವ ಮೂಲಕ ಶಾಲಾ ಕಾಲೇಜುಗಳ ಮಕ್ಕಳಲ್ಲಿ ಪರಿಸರ, ಸಂಚಾರ ನಿಯಮ, ಗುರು ಹಿರಿಯರನ್ನು ಗೌರವಿಸುವ ಗುಣ ಹೀಗೆ ಎಲ್ಲವನ್ನೂ ತಿಳಿಸಿಕೊಡುವ ಅವಶ್ಯಕತೆ ಇದೆ. ನಮ್ಮ ಪೂರ್ವಿಕರು ಆರಂಭಿಸಿದ ಜಾನಪದ ಕಲೆ ಇಂದು ನಶಿಸುತ್ತಿದ್ದು, ಯುವ ಸಮುದಾಯಕ್ಕೆ ಮತ್ತೊಮ್ಮೆ ಅದರ ಬಗ್ಗೆ ತಿಳಿಸಿಕೊಡುವ ಅವಶ್ಯಕತೆ ಇದೆ. ದೇಶದಲ್ಲಿ ಸ್ವಸ್ಥ ಸಮಾಜ ನಿರ್ಮಾಣವಾಗಬೇಕಾದರೆ ನಮ್ಮ ಯುವ ಸಮುದಾಯವನ್ನು ಸರಿಯಾದ ಮಾರ್ಗದಲ್ಲಿ ಬೆಳೆಸಬೇಕು ಎಂದು ಹೇಳಿದರು.

ರೋಟರಿ ಜೋನ್ 9ರ ಸಹಾಯಕ ಗವರ್ನರ್ ಜಿ.ಎನ್. ಮಂಜುನಾಥ್ ಮಾತನಾಡಿ, ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ತಂಡದ 11ನೇ ಅಧ್ಯಕ್ಷರಾಗಿ ಗಂಗಾಧರ್ ಅವರು ಆಯ್ಕೆಯಾಗಿದ್ದಾರೆ. ಈಗಾಗಲೇ ಅವರು ತಮ್ಮ ಅಧಿಕಾರ ಸ್ವೀಕಾರಕ್ಕೂ ಮೊದಲೇ 10 ಸಾವಿರ ಸಸಿಗಳನ್ನು ಮಕ್ಕಳಿಗೆ ವಿತರಣೆ ಮಾಡುವ ಕಾರ್ಯಕ್ರಮ ಮಾಡಿದ್ದಾರೆ. ಆರಂಭದಲ್ಲಿ ಒಳ್ಳೆಯ ಕಾರ್ಯಕ್ರಮ ಮಾಡುವ ಮೂಲಕ ಅಧಿಕಾರ ಸ್ವೀಕರಿಸಿದ್ದು, ಮುಂದಿನ ದಿನಗಳಲ್ಲಿ ಮತ್ತಷ್ಟು ಒಳ್ಳೆಯ ಕೆಲಸಗಳನ್ನು ಮಾಡಲಿ ಎಂದರು.

ರೋಟರಿ ಜೋನ್ 9ರ ವಲಯ ಸೇನಾನಿ ಮಮತ ಪಾಟೀಲ್ ಮಾತನಾಡಿ, ರೋಟರಿ ಸಂಸ್ಥೆಯಲ್ಲಿ ಹಲವು ಕ್ಲಬ್‌ಗಳು ಇದ್ದು, ರೋಟರಿ ರಾಯಲ್ ಸಂಸ್ಥೆ ಯುವಕರನ್ನೇ ಹೆಚ್ಚು ಒಳಗೊಂಡಿರುವ ಸಂಸ್ಥೆಯಾಗಿದೆ. ಹಾಗಾಗಿ ಈ ಕ್ಲಬ್‌ನ ಮೇಲೆ ನಿರೀಕ್ಷೆ ಹೆಚ್ಚಾಗಿದ್ದು, ಒಳ್ಳೆಯ ಕೆಲಸ ಮಾಡುವ ಮೂಲಕ ಸಮಾಜಕ್ಕೆ ಮಾದರಿಯಾಗಬೇಕು ಎಂದರು.

## ಅಧಿಕಾರ ಹಸ್ತಾಂತರ

ಇದೇ ವೇಳೆ ಕಾರ್ಯಕ್ರಮದಲ್ಲಿ ಈ ಹಿಂದೆ 2024-25ನೇ ಸಾಲಿಗೆ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದ ಯು.ವಿ. ಸಚ್ಚಿನ್ ಅವರು 2025-26ನೇ ಸಾಲಿನ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿದ್ದ ಟೈಮ್ಸ್ ಗಂಗಾಧರ್ ಬಿ.ಕೆ. ಅವರಿಗೆ ಅಧಿಕಾರ ಹಸ್ತಾಂತರ ಮಾಡಿದರು. ಇದೇ ವೇಳೆ ನೂತನ ಕಾರ್ಯದರ್ಶಿಯಾಗಿ ರವಿ ಕುಮಾರ್ ಪಿ. ಖಜಾಂಚಿಯಾಗಿ ದಿಲೀಪ್ ಕುಮಾರ್ ಎಚ್.ಕೆ. ಅವರು ಅಧಿಕಾರ ಸ್ವೀಕಾರ ಮಾಡಿದರು.

ಟೈಮ್ಸ್ ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿ ಬಿ.ಕೆ. ಗಂಗಾಧರ್ ಮಾತನಾಡಿ, ಸಮಾಜ ನಮಗೆ ಒಳಿತ ಮಾಡಿದಾಗ ಪುನಃ ಸಮಾಜಕ್ಕೆ ನಾವೇನಾದರೂ ಕೊಡುಗೆ ನೀಡಬೇಕಾಗಿರುವುದು ಎಲ್ಲರ ಹೊಣೆ. ಈ ನಿಟ್ಟಿನಲ್ಲಿ ಒಂದು ಸಣ್ಣ ಸಾಮಾನ್ಯರ ಕುಟುಂಬದಿಂದ ಬಂದು ಸಮಾಜದಲ್ಲಿ ಒಂದು ಸ್ಥಾನಮಾನ ಸಿಕ್ಕದ ಮೇಲೆ ಸಮಾಜಕ್ಕೆ ಏನನ್ನಾದರೂ ಸೇವೆ ಮಾಡಬೇಕು ಎಂಬ ನಿಟ್ಟಿನಲ್ಲಿ ಅಂತರಾಷ್ಟ್ರೀಯ ಸಂಘಟನೆಯಾಗಿರುವ ರೋಟರಿ ಸಂಸ್ಥೆಯ ಮೂಲಕ ಒಂದಿಷ್ಟು ಕೆಲಸ ಮಾಡುವ ಹಂಬಲ ಇಟ್ಟುಕೊಳ್ಳಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆ ಮಾಡಿ ರಾಜ್ಯ ಮಟ್ಟದ ಕಾವ್ಯಶ್ರೀ ಪ್ರಶಸ್ತಿ ವಿಜೇತೆ ಸ್ಫೂರ್ತಿ ಎಸ್. ಆರ್. ಅವರನ್ನು ಸನ್ಮಾನಿಸಲಾಯಿತು.

ರೋಟರಿ ರಾಯಲ್ ಸಂಸ್ಥೆಯ ಮಾಜಿ ಕಾರ್ಯದರ್ಶಿ ಆರ್.ಟಿ. ಪುನೀತ್, ಪದಾಧಿಕಾರಿಗಳಾದ ಡಾ. ಬಿ. ವಿಕ್ರಂ, ಕೆ.ಸಿ. ನವೀನ್ ಕುಮಾರ್, ಎಸ್. ಯೋಗೇಶ್, ಮಹೇಶ್, ಸಹನಾ ಸಚ್ಚಿನ್ ಹಾಗೂ ಇತರರಿದ್ದರು.

# ಪ್ರತ್ಯೇಕ ಕ್ಷೇಮಾಭಿವೃದ್ಧಿ ನಿಗಮಕ್ಕೆ ಟೈಲರ್‌ಗಳ ಆಗ್ರಹ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಪ್ರತ್ಯೇಕ ಕ್ಷೇಮಾಭಿವೃದ್ಧಿ ನಿಗಮ ಸ್ಥಾಪನೆ ಸೇರಿ 17 ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಆ. 10 ರಂದು ಉಡುಪಿಯಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಟೈಲರ್ ಅಸೋಸಿಯೇಷನ್ ಸಲಹಾ ಸಮಿತಿ ಅಧ್ಯಕ್ಷ ಹೆಚ್.ಎಸ್. ವೆಂಕಟೇಶ್ ತಿಳಿಸಿದರು.

ನಗರದ ಜಿಲ್ಲಾ ಕುರುಹಿನ ಶೆಟ್ಟಿ ಭವನದಲ್ಲಿ ರಾಜ್ಯ ಟೈಲರ್ ಅಸೋಸಿಯೇಷನ್ ವತಿಯಿಂದ ನಡೆದ ಗೌರಿಕೊಪ್ಪಲು ಮತ್ತು ಕೆ.ಆರ್. ಪುರಂ ವಲಯ ಸಮಿತಿ ವಾರ್ಷಿಕೋತ್ಸವ ಉದ್ಘಾಟಿಸಿ ಮಾತನಾಡಿ, ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಸುಮಾರು 10 ಸಾವಿರ ವೃತ್ತಿ ಬಾಂಧವರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಟೈಲರ್ ವೃತ್ತಿ ಈಗ ಸಂಕಷ್ಟ ಎದುರಿಸುತ್ತಿದ್ದು ಸರ್ಕಾರ ನಮ್ಮ ಮನವಿಗೆ ಸ್ಪಂದಿಸಬೇಕೆಂದು ಆಗ್ರಹಿಸಿದರು.

ಟೈಲರ್ ಸಂಘಕ್ಕೆ ಸದಸ್ಯತ್ವ ಪಡೆದವರಿಗೆ ಸರ್ಕಾರದ ಸವಲತ್ತು ಸಿಗಬೇಕು. ಅರ್ಹರು ಯೋಜನೆಗಳಿಂದ ವಂಚಿತರಾಗಬಾರದೆಂಬ ಉದ್ದೇಶದಿಂದ ಸಂಘವು ಹೋರಾಟ ಮಾಡುತ್ತಲೇ ಇದೆ. ಎಸ್‌ಎಸ್‌ಎಲ್‌ಸಿಯಲ್ಲಿ ಹೆಚ್ಚು ಅಂಕ



ಪಡೆದ ಸಂಘದ ಸದಸ್ಯರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭ ಪ್ರತಿವರ್ಷ ಆಯೋಜಿಸಲಾಗುತ್ತಿದೆ ಎಂದರು.

ಕಾರ್ಮಿಕ ಇಲಾಖೆ ಅಧಿಕಾರಿ ಕಾವ್ಯ ಮಾತನಾಡಿ, ಯಾವುದೇ ಸಂಘವಾಗಿರಲಿ ಮೊದಲು ಒಗ್ಗಟ್ಟು ಇರಬೇಕು. ಟೈಲರ್ ಅಸೋಸಿಯೇಷನ್‌ಗೆ ಸದಸ್ಯರು ಗೌರವ ಕೊಡಬೇಕು. ಅಸೋಸಿಯೇಷನ್ ಇಲ್ಲದೇ ಅಸಂಘಟಿತ ಕಾರ್ಮಿಕರು ಅನೇಕರು ಇದ್ದಾರೆ. ಅಸಂಘಟಿತ ಕಾರ್ಮಿಕರಿಗಾಗಿಯೇ ಅನೇಕ ಯೋಜನೆಗಳಿವೆ. ಅನೇಕರಿಗೆ ಸರ್ಕಾರದಿಂದ ಇರುವ ಸೌಲಭ್ಯಗಳ ಮಾಹಿತಿ ಇರುವುದಿಲ್ಲ. ಈ ಬಗ್ಗೆ ಅರಿವು ಮೂಡಿಸುವ ಕೆಲಸ ಪದಾಧಿಕಾರಿಗಳಿಂದ ಆಗಬೇಕೆಂದರು.

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೆರವೇರಿಸಲಾಯಿತು. ಟೈಲರ್ ವೃತ್ತಿ ಬಾಂಧವರಿಗೆ ಗುರುತಿನ ಚೀಟಿ ವಿತರಿಸಲಾಯಿತು.

ಟೈಲರ್ ಸಂಘದ ಮುಖಂಡ ಮಲ್ಲಿಕ್, ಗೌರಿಕೊಪ್ಪಲು ಮತ್ತು ಕೆ.ಆರ್. ಪುರಂ ವಲಯ ಸಮಿತಿಯ ಎಂ.ಟಿ. ಲಕ್ಷ್ಮಣ್, ಕ್ಷೇತ್ರ ಸಮಿತಿ ಅಧ್ಯಕ್ಷ ಬಿ.ಎಂ. ನಾಗೇಂದ್ರ, ಸರಸ್ವತಿ ಪುರಂ ವಲಯ ಸಮಿತಿಯ ಡಿ.ಡಿ. ವೇಲಾಪುರಿಗೌಡ ಮತ್ತಿತರರಿದ್ದರು.

# ಮನೆ ಮನೆಗೆ ಪೊಲೀಸ್ ಯೋಜನೆಗೆ ಚಾಲನೆ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಜನಸ್ನೇಹಿ ಆಡಳಿತ ಜಾರಿಗೆ ತರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಗೃಹ ಇಲಾಖೆ ಮನೆ ಮನೆಗೆ ಪೊಲೀಸ್ ಯೋಜನೆಗೆ ತಾಲ್ಲೂಕಿನ ಹೆಬ್ಬಾಳು ಗ್ರಾಮದಲ್ಲಿ ಚಾಲನೆ ನೀಡಲಾಯಿತು.

ಆರಕ್ಷಕ ನಿರೀಕ್ಷಕ ರೇವಣ್ಣ ಮಾತನಾಡಿ, ಸಾರ್ವಜನಿಕರ ಕುಂದು ಕೊರತೆಗಳನ್ನು ಮನೆ ಮನೆಗೆ ತೆರಳಿ ಆಲಿಸಿ, ಸಮಸ್ಯೆಗಳಿಗೆ ಪರಿಹಾರ ನೀಡಬೇಕು ಎಂಬ ಸದಾಶಯದಿಂದಲೇ ಇಂತಹ ಕಾರ್ಯಕ್ರಮ ರೂಪಿಸಲಾಗಿದೆ. ಅದಕ್ಕೆ ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದೆ. ಕಾರಣ ಪ್ರತಿ ಗ್ರಾಮದಲ್ಲಿ 40 ಮನೆಗಳಿಗೆ ಗ್ರಾಮದ ಮುಖಂಡರ ಸಮಿತಿ ರಚಿಸಿ, ಸಣ್ಣ-ಪುಟ್ಟ ವಾಜ್ಯಗಳನ್ನು ಇಲ್ಲಿಯೇ ಪರಿಹರಿಸಲಾಗುತ್ತದೆ. ಅಲ್ಲದೆ ಇತ್ತೀಚಿನ ದಿನದಲ್ಲಿ ಒಂಟಿಮನೆಗಳಲ್ಲಿ ಕಳ್ಳತನ ಹೆಚ್ಚಾಗುತ್ತಿದ್ದು, ಮುನ್ನೆಚ್ಚರಿಕೆಯಿಂದ ಅನುಮಾನ ಬಂದ ವ್ಯಕ್ತಿಗಳ ಬಗ್ಗೆ ಪೊಲೀಸ್ ಇಲಾಖೆಗೆ ತಿಳಿಸುವುದು. ಪೊಲೀಸ್ ವ್ಯವಸ್ಥೆಯನ್ನು ಬಲಪಡಿಸುವುದರ ಜತೆಗೆ ನೇರ ಇಲಾಖೆ ಪರಿಶೀಲನೆ ನಡೆಸುವ ಹಿನ್ನಲೆಯಲ್ಲಿ ಶ್ರದ್ದೆಯಿಂದ ಕೆಲಸ ನಿರ್ವಹಿಸಬೇಕು ಎಂದು ಹೇಳಿದರು.

ತಾಲ್ಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಬ್ಬಾಳು ಹಾಲಪ್ಪ ಮಾತನಾಡಿ, ರಾಜ್ಯ ಸರ್ಕಾರದ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮ ಇಡೀ ದೇಶದಲ್ಲಿ ಪ್ರಥಮ. ಜನರ ಸಮಸ್ಯೆಗಳಿಗೆ ಖುದ್ದು ಮನೆಗೆ ತೆರಳಿ ಮಾಹಿತಿ ಮತ್ತು ಸಮಸ್ಯೆ ಪರಿಹಾರಕ್ಕೆ ಮುಂದಾದ ಸಂದರ್ಭದಲ್ಲಿ ಪೊಲೀಸರಿಗೆ ಗೌರವಿಸುವ ನಿಟ್ಟಿನಲ್ಲಿ ಸಾರ್ವಜನಿಕರು ಮುಂದಾಗಬೇಕಿದೆ. ಪೊಲೀಸರು ಜನಸ್ನೇಹಿಯಾಗಿ ಸಹೋದರತ್ವದ ನಿಟ್ಟಿನಲ್ಲಿ ಕೆಲಸ ನಿರ್ವಹಿಸಲಿದ್ದಾರೆ. ಹಾಗೆಯೇ ಸಾರ್ವಜನಿಕರ ಹೆಚ್ಚಿನ ಸಹಕಾರ ಮುಖ್ಯ, ಜನರು ಗ್ರಾಮದಲ್ಲಿ ನಡೆಯುತ್ತಿರುವ ಅಹಿತಕರ ಘಟನೆಗಳ ಬಗ್ಗೆ ತಿಳಿಸಿ ಸಮಸ್ಯೆಗಳನ್ನು ಪರಿಹರಿಸಬೇಕಿದೆ. ಬೇಲೂರು ಪೊಲೀಸ್ ಇಲಾಖೆ ಇಂತಹ ಅಮೂಲ್ಯ ಯೋಜನೆಯನ್ನು ಹೆಬ್ಬಾಳು ಗ್ರಾಮದಲ್ಲಿ ನಡೆಸಿದ್ದು ನಿಜಕ್ಕೂ ಸಂತೋಷವಾಗಿದೆ ಎಂದರು.

ಪಿಎಸ್‌ಐ ಶಿವಾನಂದಗೌಡ ಪಾಟೀಲ್ ಮಾತನಾಡಿ, ತಮ್ಮ ತಮ್ಮ ಗ್ರಾಮಗಳಲ್ಲಿ ವಿಶೇಷವಾಗಿ ಪೊಲೀಸ್ ಬೀಟ್‌ಗಳನ್ನು ಹಾಕುವುದರಿಂದ ಸಮಸ್ಯೆಗಳನ್ನು ಗ್ರಾಮಗಳಲ್ಲಿಯೇ ಬಗೆಹರಿಸುವ ಕೆಲಸ ಮಾಡಲಾಗುತ್ತದೆ ಎಂದರು.

ಪಿಎಸ್‌ಐ ಶಂಕ್ರಪ್ಪ, ಎಸ್‌ಐ ಚಂದ್ರಪ್ಪ, ಗ್ರಾ.ಪಂ. ಸದಸ್ಯರಾದ ಗಿರೀಶ್, ಗೋಪಾಲ್, ಮುಖಂಡರಾದ ಮೋಹನ್, ಶಿವಮೂರ್ತಿ, ಶೇಖರಪ್ಪ, ದೇವರಾಜ್ ಇತರರಿದ್ದರು.

# ವೈದ್ಯರ ಸಲಹೆ ಇಲ್ಲದೆ ಮಾತ್ರೆ ಸೇವನೆ ಬೇಡ

## ಹೃದ್ರೋಗ ತಜ್ಞ ಡಾ. ವೈ.ಎಸ್. ಶ್ರೀಮಂತ್ ಸಲಹೆ | ರೆಡ್ ಕ್ರಾಸ್‌ನಿಂದ ಆರೋಗ್ಯ ಅರಿವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಆರೋಗ್ಯದಲ್ಲಿ ಸಮಸ್ಯೆ ಕಾಣಿಸಿಕೊಂಡಾಗ ವೈದ್ಯರ ಸಲಹೆ ಇಲ್ಲದೆ ಮೆಡಿಕಲ್ ಶಾಪ್‌ಗಳಲ್ಲಿ ಸಿಗುವ ಮಾತ್ರೆ ಸೇವಿಸಿ ಸುಮ್ಮನಿರುವುದು ದೇಹದ ಮೇಲೆ ದುಷ್ಪರಿಣಾಮ ಬೀರುತ್ತದೆ ಎಂದು ಮೈಸೂರು ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಹೃದ್ರೋಗ ತಜ್ಞ ಡಾ. ವೈ.ಎಸ್. ಶ್ರೀಮಂತ್ ಹೇಳಿದರು.

ನಗರದ ರೆಡ್ ಕ್ರಾಸ್ ಭವನದಲ್ಲಿ ಹಮ್ಮಿಕೊಂಡಿದ್ದ ಹೃದಯಾಘಾತಗಳ ಬಗ್ಗೆ ಮುನ್ನೆಚ್ಚರಿಕೆ ಹಾಗೂ ಸಿಪಿಆರ್ ವಿಧಾನಗಳ ಅರಿವು ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದರು.

ಹೊಟ್ಟೆ, ಎದೆ, ತಲೆನೋವು ಹೀಗೆ ಯಾವ ಸಮಸ್ಯೆ ಕಂಡುಬಂದರೂ ಗ್ಯಾಸ್ಟ್ರಿಕ್ ಎಂದು ಭಾವಿಸಿ ಮೆಡಿಕಲ್ ಶಾಪ್‌ಗೆ ತೆರಳಿ ನಾವೇ ವೈದ್ಯರೆಂಬಂತೆ ಮಾತ್ರೆ ಪಡೆಯುತ್ತೇವೆ. ಅದರ ಬದಲು ಸಮೀಪದ ಆಸ್ಪತ್ರೆಗಳಲ್ಲಿ ಇಸಿಜಿ ಪರೀಕ್ಷೆ ಮಾಡಿಸಿಕೊಂಡರೆ




ಖಾಯಿಲೆಯ ಸ್ಪಷ್ಟತೆ ತಿಳಿಯುತ್ತದೆ. ಬಳಿಕ ಮುಂದಿನ ಕ್ರಮಗಳನ್ನು ವೈದ್ಯರ ಸಲಹೆಯಂತೆ ಅನುಸರಿಸಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಆರೋಗ್ಯ ಕುರಿತಾಗಿ ಬರುವ ಸುಳ್ಳು ಮಾಹಿತಿಗಳಿಗೆ ಜೋತುಬಿದ್ದು ಹಲವರು ತೊಂದರೆಗೆ ಸಿಲುಕುತ್ತಿದ್ದಾರೆ ಎಂದರು.

ಕಳೆದ 20 ವರ್ಷಕ್ಕೆ ಹೋಲಿಸಿದರೆ ಹೃದಯಾಘಾತ ಪ್ರಕರಣಗಳು ಹೆಚ್ಚುತ್ತಿವೆ. ಆದರೆ ಎರಡು ತಿಂಗಳಿಂದ ಹೃದಯಾಘಾತದಿಂದ ಸಾವು ನೋವು ಅಧಿಕವಾಗುತ್ತಿದೆ ಎಂಬುದೆಲ್ಲ ಸುಳ್ಳು. ಮಾಧ್ಯಮಗಳಲ್ಲಿ ಹೆಚ್ಚಿನ ಪ್ರಚಾರ ದೊರೆತು ಜನರಲ್ಲಿ ಆ ಭಾವನೆ ಉಂಟಾಗಿದೆ. ಬದಲಾದ ಜೀವನ ಶೈಲಿಯಿಂದ ಇತ್ತೀಚಿನ ವರ್ಷಗಳಲ್ಲಿ ಹೃದಯಾಘಾತ ಸಮಸ್ಯೆಗಳು ಕಾಣಿಸಿಕೊಳ್ಳುತ್ತಿದೆ. ಅದರಲ್ಲೂ 50ಕ್ಕಿಂತ ಕಡಿಮೆ ವಯಸ್ಸಿನವರಿಗೆ ಸಮಸ್ಯೆ ಗೋಚರಿಸುತ್ತಿರುವುದು ಆತಂಕಕಾರಿ. ಅದಕ್ಕೆ ನಮ್ಮ ಜೀವನ ಪದ್ಧತಿಯೇ ಕಾರಣವಾಗಿದೆ. ನಮ್ಮ ಪೂರ್ವಿಕರು ಶ್ರಮವಹಿಸಿ ಕೆಲಸ ಮಾಡುತ್ತಿದ್ದರು. ಆದ್ದರಿಂದ ಅವರ ಆರೋಗ್ಯ ಸದೃಢವಾಗಿರುತ್ತಿತ್ತು. ಈಗಿನ ದಿನಗಳಲ್ಲಿ ಶ್ರಮದಾಯಕ ಕೆಲಸ ಕಡಿಮೆಯಾಗಿರುವುದರಿಂದ ಆರೋಗ್ಯದಲ್ಲಿ ಬದಲಾವಣೆಗಳಾಗುತ್ತಿವೆ.

ಅದಕ್ಕೆ ತಕ್ಕಂತೆ ನಾವು ಆಹಾರ, ವ್ಯಾಯಾಮ, ಒತ್ತಡ ರಹಿತ ಜೀವನ, ದುಶ್ಚಟಗಳಿಂದ ದೂರವಿರುವುದು, ಅತಿಯಾದ ಮೊಬೈಲ್ ಬಳಕೆಗೆ ಕಡಿವಾಣ ಹಾಕುವುದು ಹೀಗೆ ಹಲವು ನಿಯಮಗಳನ್ನು ಪಾಲಿಸಬೇಕಾಗುತ್ತದೆ ಎಂದು ಸಲಹೆ ನೀಡಿದರು.

ಉತ್ತಮ ಗಾಳಿ ಹೊಂದಿರುವ ಜಿಲ್ಲೆಗಳ ಪಟ್ಟಿಯಲ್ಲಿ ಹಾಸನಕ್ಕೆ ಯಾವಾಗಲೂ ಅಗ್ರ ಸ್ಥಾನವಿದೆ. ಇಂತಹ ಸುಂದರ ವಾತಾವರಣದಲ್ಲಿ ಬದುಕುತ್ತಿರುವ ನಾವುಗಳು ನಮ್ಮದಲ್ಲದ ತಪ್ಪಿಗೆ ಪಶ್ಚಾತ್ತಾಪ ಪಡುವಂತಾಗಿದೆ. ಸಿಗರೇಟ್ ಸೇದುವುದು ಅಪಾಯಕಾರಿ. ಸಿಗರೇಟ್ ಸೇದುವ ವ್ಯಕ್ತಿ ತನ್ನ ಆಯುಸ್ಸನ್ನು ಕಡಿಮೆ ಮಾಡಿಕೊಳ್ಳುವುದು ಮಾತ್ರವಲ್ಲದೆ ಅಕ್ಕಪಕ್ಕದವರಿಗೂ ಅದೇ ಶಿಕ್ಷೆ ನೀಡುತ್ತಾನೆ. ಆದ್ದರಿಂದ ಯಾರಾದರೂ ಹತ್ತಿರದಲ್ಲಿ ಸಿಗರೇಟ್ ಸೇದುತ್ತಿದ್ದರೆ ಅಂತವರನ್ನು ದೂರ ಕಳುಹಿಸುವ ಕೆಲಸ ತಪ್ಪದೇ ಮಾಡಬೇಕು. ಈ ವಿಚಾರದಲ್ಲಿ ಜಾಗೃತಿ ವಹಿಸದಿದ್ದರೆ ದುಶ್ಚಟಗಳಿಲ್ಲದಿದ್ದರೂ ಸಮಸ್ಯೆಗೆ ಸಿಲುಕಬೇಕಾಗುತ್ತದೆ. ಸಣ್ಣಪುಟ್ಟ ನಿರ್ಲಕ್ಷ್ಯಗಳೇ ನಮ್ಮನ್ನು ಹಾಗು ಕುಟುಂಬಗಳನ್ನು ತೊಂದರೆಗೆ ದೂಡುತ್ತವೆ ಎಂದರು.

ಹಾಸನ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಸಮೂಹ ಶಿಕ್ಷಣ ಸಂಸ್ಥೆ ನಿರ್ದೇಶಕ ಡಾ. ಪ್ರಸನ್ನ ಎನ್.ರಾವ್, ಎಸ್‌ಡಿಎಂ ಆಯುರ್ವೇದ ಕಾಲೇಜು ಡಯಟಿಶಿಯನ್ ಡಾ. ಕವಿತಾ, ಡಾ. ಹೆಚ್.ಜೆ. ತೇಜಸ್ವಿ ಮಾತನಾಡಿದರು.

ಜಿಲ್ಲಾ ರೆಡ್ ಕ್ರಾಸ್ ಸಭಾಪತಿ ಹೆಚ್.ಪಿ. ಮೋಹನ್, ಉಪಸಭಾಪತಿ ಡಾ. ವೈ.ಎಸ್. ವೀರಭದ್ರಪ್ಪ, ಬೇಲೂರು ತಾಲ್ಲೂಕು ಸಭಾಪತಿ ವೈ.ಎಸ್. ಸಿದ್ದೇಗೌಡ, ಜಿಲ್ಲಾ ಕಾರ್ಯದರ್ಶಿ ಶಬ್ಬೀರ್ ಅಹ್ಮದ್, ಖಜಾಂಚಿ ಹೆಚ್.ಡಿ. ಜಯೇಂದ್ರಕುಮಾರ್ ಜಿಲ್ಲಾ ನಿರ್ದೇಶಕರಾದ ಡಾ. ಎ. ಸಾವಿತ್ರಿ, ಡಾ. ರಂಗಲಕ್ಷ್ಮೀ, ಡಾ. ಭಾರತಿ ರಾಜಶೇಖರ್, ಕೆ.ಟಿ. ಜಯಶ್ರೀ, ಬಿ.ಆರ್. ಉದಯಕುಮಾರ್ ಇತರರಿದ್ದರು.

# ರೈತ ಸಂಪರ್ಕ ಕೇಂದ್ರದಲ್ಲಿ ಕಳ್ಳತನ

ಚನ್ನರಾಯಪಟ್ಟಣ: ರೈತ ಸಂಪರ್ಕ ಕೇಂದ್ರದ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು ಅಂದಾಜು 76 ಸಾವಿರ ರೂ. ಮೌಲ್ಯದ ಸಾಮಾಗ್ರಿ ಕಳವು ಮಾಡಿ ಸಿಸಿಟಿವಿ ಕ್ಯಾಮರಾದ ಡಿವಿಆರ್ ಮತ್ತು ಹಾರ್ಡ್‌ಡಿಸ್ಕ್ ಕಳವು ಮಾಡಿರುವ ಘಟನೆ ಉದಯಪುರದಲ್ಲಿ ನಡೆದಿದೆ.

ಜು. 17ರ ರಾತ್ರಿ ಕೇಂದ್ರದ ಬಾಗಿಲು ಮುರಿದು ಪ್ರವೇಶಿಸಿರುವ ಕಳ್ಳರು ದಾಖಲೆ ಪುಸ್ತಕಗಳನ್ನೆಲ್ಲಾ ಚೆಲ್ಲಾಪಿಲ್ಲಿ ಮಾಡಿ ದಾಸ್ತನು ಮಾಡಿದ್ದ ಮುಸುಕಿನ ಜೋಳದ ತಳಿ ಎಓ3218ರ ಮಾರ್ಕ್‌ನ 4 ಕೆ.ಜಿ.ಯ 20 ಪ್ಯಾಕೇಟ್, ಕ3436 ರ ಮಾರ್ಕ್‌ನ 4 ಕೆ.ಜಿ.ಯ 21 ಪ್ಯಾಕೇಟ್, 10 ಕೆ.ಜಿ.ಯ 8 ಸೆಣಬು ಚೀಲ, 6 ಟಾರ್ಪಲಿನ್‌ಗಳನ್ನು ಕದ್ದೊಯ್ದಿದ್ದಾರೆ. ಸಾಕ್ಷ್ಯ ನಾಶಕ್ಕಾಗಿ ಸಿಸಿಟಿವಿ ಕ್ಯಾಮರಾದ ಡಿವಿಆರ್ ಮತ್ತು ಹಾರ್ಡ್‌ಡಿಸ್ಕ್ ಕಳ್ಳತನ ಮಾಡಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇತಿಹಾಸದಲ್ಲಿ ಈ ದಿನ

## ಜುಲೈ-22

1947: ಭಾರತ ಸಂವಿಧಾನ ಸಭೆ ತ್ರಿವರ್ಣ ಧ್ವಜವನ್ನು ಅಧಿಕೃತವಾಗಿ ರಾಷ್ಟ್ರೀಯ ಧ್ವಜವಾಗಿ ಅಂಗೀಕರಿಸಿತು

2019: ಯಶಸ್ವಿಯಾಗಿ ಚಂದ್ರಯಾನ2 ಅನ್ನು ಉಡಾವಣೆ ಮಾಡಲಾಯಿತು.

2008: ಡಾ. ಮನಮೋಹನ್ ಸಿಂಗ್ ನೇತೃತ್ವದ ಸರ್ಕಾರವು ಲೋಕಸಭೆಯಲ್ಲಿ ವಿಶ್ವಾಸ ಮತ ಗೆದ್ದಿತು.

### ಜನನ

1872: ವಿಷ್ಣು ದಿಗಂಬರ್ ಪಳುಸ್ಕರ್, ಪ್ರಸಿದ್ಧ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತಜ್ಞರು. ಗಾನಶಾಲೆ (ಗಂಧರ್ವ ಮಹಾವಿದ್ಯಾಲಯ) ಸ್ಥಾಪಿಸಿದರು. ಭಾರತೀಯ ಶಾಸ್ತ್ರೀಯ ಸಂಗೀತವನ್ನು ಸಾಮಾನ್ಯರಿಗೆ ತಲುಪಿಸಲು ಮಹತ್ವಪೂರ್ಣ ಪಾತ್ರ ವಹಿಸಿದರು.

### ಮರಣ

2000: ಸಿರಿಮಾವೋ ಬಂಡಾರನಾಯಕ, ಶ್ರೀಲಂಕಾದ ವಿಶ್ವದ ಪ್ರಥಮ ಮಹಿಳಾ ಪ್ರಧಾನಮಂತ್ರಿ, ಭಾರತದೊಂದಿಗೆ ರಾಜತಾಂತ್ರಿಕ ಸಂಬಂಧಗಳ ದೃಢೀಕರಣದಲ್ಲಿ ಪ್ರಮುಖ ಪಾತ್ರ. ಭಾರತೀಯ ಸಮುದಾಯದ ಜೊತೆ ಆಳವಾದ ಸಂಬಂಧ ಹೊಂದಿದ್ದರು.

# ಭವಿಷ್ಯದ ದೃಷ್ಟಿಯಿಂದ ಪರಿಸರ ಸಂರಕ್ಷಣೆ ಮಾಡಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮುಂದಿನ ಪೀಳಿಗೆ ಆರೋಗ್ಯವಾಗಿರಲು ಪರಿಸರದ ಅತ್ಯವಶ್ಯಕವಾಗಿದ್ದು, ಪರಿಸರ ಸಂರಕ್ಷಣೆಗೆ ಎಲ್ಲರೂ ಆದ್ಯತೆ ನೀಡಬೇಕು ಎಂದು ರೋಟರಿ ಜಿಲ್ಲಾ ಗವರ್ನರ್ ಕೆ. ಪಾಲಾಕ್ಷ ಹೇಳಿದರು.

ನಗರದ ವಿಜಯನಗರ ಟೈಮ್ಸ್ ಅಂತಾರಾಷ್ಟ್ರೀಯ ಶಾಲೆಯಲ್ಲಿ ರೋಟರಿ ಕ್ಲಬ್ ಆಫ್ ಹಾಸನ ರಾಯಲ್, ಬಟ್ಟೆ ಅಂಗಡಿ, ಅಕ್ಷರ ಅಕಾಡೆಮಿ, ಅಕ್ಷರ ಬುಕ್ ಹೌಸ್ ವತಿಯಿಂದ ಹಮ್ಮಿಕೊಂಡಿದ್ದ 2025-26ನೇ ಸಾಲಿನ ಹತ್ತು ಸಾವಿರ ಸಸಿ ವಿತರಣೆ ಟೈಮ್ಸ್ ಹಸಿರ ಸಿರಿ ಸಸ್ಯೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಭೂ ಮಂಡಲದೊಳಗೆ ಜೀವಿಸುವ




ಪ್ರತಿಯೊಂದು ಜೀವಿಗೂ ಪರಿಸರದ ಅವಶ್ಯಕತೆ ಇದ್ದು, ಪರಿಸರವನ್ನು ಅತ್ಯಂತ ಕಾಳಜಿಯಿಂದ ನೋಡಿಕೊಳ್ಳಬೇಕಿದೆ. ವಿವಿಧ ಉದ್ದೇಶಕ್ಕಾಗಿ ನಾವು ಇಂದು ಪರಿಸರದ ವ್ಯಾಪ್ತಿಯನ್ನು ಕಡಿಮೆ ಮಾಡುತ್ತಿದ್ದೇವೆ. ಆದರೆ ಪರಿಸರ ಒಮ್ಮೆ ಮುನಿಸಿಕೊಂಡರೆ ನಾವು ಇಲ್ಲವಾಗುತ್ತೇವೆ. ಹಾಗಾಗಿ ಉತ್ತಮ ಆರೋಗ್ಯಕ್ಕಾಗಿ ಹಾಗೂ ಮುಂದಿನ ಪೀಳಿಗೆಗಾಗಿ ಪರಿಸರ ಸಂರಕ್ಷಿಸಿ ಉಳಿಸಬೇಕಾಗಿದೆ. ಪ್ರತಿಯೊಂದು ಮಗುವು ತಮ್ಮ ಹಿರಿಯರ ಹೆಸರಿನಲ್ಲಿ ಒಂದೊಂದು ಸಸಿಗಳನ್ನು ನೆಟ್ಟು ಮರವಾಗುವಂತೆ ನೋಡಿಕೊಳ್ಳಬೇಕು ಎಂದರು.

ಟೈಮ್ಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಟೈಮ್ಸ್ ಬಿ.ಕೆ. ಗಂಗಾಧರ್ ಮಾತನಾಡಿ, ಸಸಿ ನೆಡಯುವುದು ಹಾಗೂ ಪೋಷಿಸುವುದು ಕೇವಲ ಸರ್ಕಾರ ಹಾಗೂ ಅರಣ್ಯ ಇಲಾಖೆಯ ಕೆಲಸ ಎಂದು ಭಾವಿಸದೆ ಪ್ರತಿಯೊಬ್ಬ ಜನಸಾಮಾನ್ಯರು ಪರಿಸರವನ್ನು ಉಳಿಸಿ ಬೆಳೆಸುವ ಕೆಲಸದಲ್ಲಿ ತೊಡಗಬೇಕು.

ನಾವುಗಳು ಮಕ್ಕಳಿಗೆ ಚಿಕ್ಕ ವಯಸ್ಸಿನಿಂದಲೇ ಸಸಿ ಬೆಳೆಸುವುದರ ಜೊತೆಗೆ ಪರಿಸರದ ಪ್ರಾಮುಖ್ಯತೆಯ ಬಗ್ಗೆ ತಿಳಿಸಿಕೊಡಬೇಕಾಗಿದೆ. ಪೋಷಕರು ತಮ್ಮ ಮಕ್ಕಳಿಗೆ ಅಸ್ತಿ ಮಾಡಿಡುವುದರ ಜೊತೆ ಜೊತೆಗೆ ಭೂಮಿ ತಾಯಿ ಪೋಷಣೆಗಾಗಿ ಒಂದೆರೆಡು ಸಸಿಗಳನ್ನು ಹಾಕುವ ಮೂಲಕ ಮಕ್ಕಳಿಗೆ ಒಂದೊಳ್ಳೆಯ ಪರಿಸರವನ್ನು ನೀಡಬೇಕು ಎಂದರು.

# ಹಾರನಹಳ್ಳಿ -ಆಲದಹಳ್ಳಿಯಲ್ಲಿ ಕೃಷಿ ಕಾರ್ಯಾನುಭವ ಶಿಬಿರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕಾರೆಕೆರೆ ಕೃಷಿ ಮಹಾವಿದ್ಯಾಲಯದ ಅಂತಿಮ ವರ್ಷದ ಬಿಎಸ್ಸಿ ವಿದ್ಯಾರ್ಥಿಗಳು ಅರಸೀಕೆರೆ ತಾಲ್ಲೂಕು ಹಾರನಹಳ್ಳಿ ಹಾಗೂ ಹಾಸನ ತಾಲ್ಲೂಕಿನ ಕೆ. ಆಲದಹಳ್ಳಿ ಗ್ರಾಮದಲ್ಲಿ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರ ಹಮ್ಮಿಕೊಂಡಿದ್ದು ಸೋಮವಾರ ಪರಿಚಯಾತ್ಮಕ ಕಾರ್ಯಕ್ರಮ ಅಂಗವಾಗಿ ಕಿರು ನಾಟಕ ಪ್ರದರ್ಶಿಸಲಾಯಿತು.

ಮೂರು ತಿಂಗಳ ಶಿಬಿರದಲ್ಲಿ ವಿದ್ಯಾರ್ಥಿಗಳು ಹಳ್ಳಿಯಲ್ಲೇ ವಾಸ್ತವ್ಯ ಮಾಡಿ ರೈತರ ಜೀವನ ಪದ್ಧತಿ, ಕೃಷಿ ವಿಧಾನ ಹಾಗೂ ಗ್ರಾಮೀಣ ಜೀವನ ಶೈಲಿ ಕುರಿತು ಅಧ್ಯಯನ ನಡೆಸಲಿದ್ದಾರೆ. ಶಿಬಿರದ ಅಂಗವಾಗಿ ವಿದ್ಯಾರ್ಥಿಗಳು ಪರಿಚಯಾತ್ಮಕ ಕಾರ್ಯಕ್ರಮದ



ಅಂಗವಾಗಿ ಕಿರು ನಾಟಕ ಪ್ರದರ್ಶಿಸಿದರು.

ಮೂರು ತಿಂಗಳ ಅವಧಿಯಲ್ಲಿ ಮಣ್ಣಿನ ಪರೀಕ್ಷೆ, ಸಮಗ್ರ ಕೃಷಿ ಪದ್ಧತಿ, ಎರೆಹುಳು ಗೊಬ್ಬರದ ಮಹತ್ವ, ಬೀಜೋಪಚಾರ, ಇತ್ಯಾದಿ ಆಧುನಿಕ ಕೃಷಿ ಕ್ರಮಗಳನ್ನು ರೈತರಿಗೆ ತಿಳಿಸಿಕೊಡುವುದು ಶಿಬಿರದ ಉದ್ದೇಶವಾಗಿದೆ.

ರಾಜ್ಯ ಸಂಪನ್ಮೂಲ ವ್ಯಕ್ತಿ ಕಾಳೇಗೌಡ, ಮೆಳಗೋಡು ಗ್ರಾಮ ಪಂಚಾಯಿತಿ ಸದಸ್ಯ ಕೃಷ್ಣೇಗೌಡ, ಅಂಗನವಾಡಿ ಶಿಕ್ಷಕಿ ರಾಣಿ, ಆಶಾ ಕಾರ್ಯಕರ್ತೆ ಕಲಾವತಿ, ಪ್ರಗತಿಪರ ರೈತ ಸಣ್ಣರಂಗೇಗೌಡ, ಕೃಷ್ಣೇಗೌಡರು, ನಾಗಚಾರ, ಮಂಜೇಗೌಡ ಮತ್ತಿತರರಿದ್ದರು.

### ರೈತರೊಂದಿಗೆ ಬೆರೆತ ಮಕ್ಕಳು

ತಾಲ್ಲೂಕಿನ ಕೆ. ಆಲದಹಳ್ಳಿಯಲ್ಲಿ ವಾಸ್ತವ್ಯ ಹೂಡಿದ್ದು ರೈತರ ಪರಿಚಯ ಹಾಗು ತಮ್ಮ ಕಾರ್ಯದ ಕುರಿತು ವಿವರಿಸಿದರು. ಗ್ರಾಮಸ್ಥರೊಂದಿಗೆ ಸಮನ್ವಯ ಸಾಧನೆ, ತಮ್ಮ ಶಿಕ್ಷಣದ ಜ್ಞಾನವನ್ನು ಹಂಚಿಕೊಳ್ಳುವುದು ಮತ್ತು ಮುಂದಿನ ದಿನಗಳಲ್ಲಿ ನಡೆಯಲಿರುವ ಕೃಷಿಚಟುವಟಿಕೆಗಳ ಕುರಿತು ರೈತರಿಗೆ ಮಾಹಿತಿ ನೀಡುವ ಉದ್ದೇಶದಿಂದ ಪರಿಚಯಾತ್ಮಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

# ಮಾನಸಿಕ ನೆಮ್ಮದಿಗೆ ಧಾರ್ಮಿಕ ಕೈಂಕರ್ಯ ನೆರವು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ದೇವಸ್ಥಾನ, ಮಠ ಮಂದಿರಗಳು ಮನುಷ್ಯನ ಬದುಕಿಗೆ ನೆಮ್ಮದಿ ನೀಡುವ ತಾಣವಾಗಿದ್ದು, ನಿತ್ಯದ ಜಂಜಾಟದಿಂದ ನೆಮ್ಮದಿ ಪಡೆಯಲು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲ್ಲೂಕಿನ ಪಾಳ್ಯ ಹೋಬಳಿ ಚಿಕ್ಕಕಣಗಾಲು ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡ ಶ್ರೀ ಕಾಳೇಶ್ವರಸ್ವಾಮಿ ಮತ್ತು ಶ್ರೀ ಮಾಸ್ತಮ್ಮ ದೇವಿ ದೇವಾಲಯ ಉದ್ಘಾಟನಾ ಮತ್ತು ಲೋಕಾರ್ಪಣೆಯ 48 ದಿನಗಳ ಪೂಜಾ ಕಾರ್ಯಕ್ರಮದಲ್ಲಿ ಮಾತನಾಡಿ, ಸನಾತನ ಧರ್ಮದ ಆದಿ ಯಾವುದು ಎಂದು ತಿಳಿದಿಲ್ಲ. ಇಷ್ಟೇ ವರ್ಷಗಳ ಹಿಂದೆ ಈ ಸನಾತನ ಧರ್ಮ ಉದಯವಾಯಿತು ಎಂದು ಹೇಳಲು ಸಾಧ್ಯವಿಲ್ಲ. ಹಲವು ಧರ್ಮಗಳಿಗೆ ಅದು ಹುಟ್ಟಿದ ಕಾಲಮಾನಗಳು ಪುರಾವೆಗಳಲ್ಲಿ ದೊರೆತಿವೆ. ಆದರೆ, ಸನಾತನ ಧರ್ಮ ಆದಿಯೂ ಇಲ್ಲದ ಅಂತ್ಯವೂ ಇಲ್ಲದ ಶ್ರೇಷ್ಠ ಧರ್ಮ. ಶತ ಮಾನಗಳಿಂದ ಹಲವು ದಾಳಿಗಳನ್ನು ಎದರಿಸಿಯೂ ಧರ್ಮ ಗಟ್ಟಿಯಾಗಿ ಬೇರೂರಿದೆ ಎಂದರೆ ಅದು ಆ ಧರ್ಮಕ್ಕೆ ಇರುವ ಶಕ್ತಿಯನ್ನು ತೋರಿಸುತ್ತದೆ. ಚಿಕ್ಕಕಣಗಾಲು ಗ್ರಾಮದಲ್ಲಿ ಗ್ರಾಮಸ್ಥರ ಸಹಕಾರದಿಂದ ನಿರ್ಮಾಣಗೊಂಡಿರುವ ಶ್ರೀ ಕಾಳೇಶ್ವರ ಸ್ವಾಮಿಯವರ ದೇವಾಸ್ಥಾನವು ಬಹಳ ಸುಂದರವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ತಾಳೂರು ಗ್ರಾಮ ಪಂಚಾಯಿತಿ ಸದಸ್ಯ ಅಣ್ಣಪ್ಪ, ಮಾಜಿ ಸದಸ್ಯ ದಿನೇಶ್, ಹಾಲು ಉತ್ಪಾದಕರ ಸಂಘದ ನಿರ್ದೇಶಕ ಸಣಪ್ಪ, ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ಅಜಿತ್, ದೇವಾಲಯ ಅರ್ಚಕ ಪ್ರದೀಪ್, ಸಮಿತಿ ಸದಸ್ಯರಾದ ಸ್ವಾಮಿ, ಚಂದ್ರಾಣಿ, ಚಂದ್ರು, ರಾಜಯ್ಯ, ಚಂದ್ರ ಹಾಜರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248